ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ನಗರಸಭೆ/ಪುರಸಭೆಗೆ ಮಂಜೂರು ನೀಡಿದ ಅನುದಾನದಲ್ಲಿ ಅವ್ಯವಹಾರ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1084 (1141) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2015-16ನೇ ಸಾಲಿನಿಂದ ಕಾರವಾರ ಜಿಲ್ಲೆಯ ಹಳಿಯಾಳ /ದಾಂಡೇಲಿ ನಗರಸಭೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಇಲ್ಲಿಯವರೆಗೆ ನೀಡಿರುವ ಅನುದಾನ ಶೀರ್ಷಿಕೆವಾರು ವಿವರ ನೀಡುವುದು ; ಹಾಗೂ ಸದರಿ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಹಾಗೂ ಆಡಿಟ್ ಪ್ರತಿಯೊಂದಿಗೆ ವಿವರ ನೀಡುವುದು ; (ಕಾಮಗಾರಿ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ. ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ನಡೆದಿರುವುದು ಕಂಡು ಬಂದಿದ್ದು, ಸರ್ಕಾರದಿಂದ ಬಂದಿರುವ ಅನುದಾನ ದುರಪಯೋಗವಾಗಿದ್ದು, ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿರುವುದರಿಂದ ಸಂಬಂಧಿಸಿದ ಅಧಿಕಾರಿಯ ಮೇಲೆ ಜಿಲ್ಲಾಧಿಕಾರಿಗಳಿಂದ ತನಿಖೆ ನಡೆಸಿ ಕ್ರಮ ಜರುಗಿಸಲಾಗುವುದೇ ? (ವಿವರ ನೀಡುವುದು)